ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ಕೊಡಗು ಜಿಲ್ಲೆಯಲ್ಲಿ ಕಂದಾಯ ಇಲಾಖೆಯ ಕಡತ ವಿಲೇವಾರಿಯಲ್ಲಿ ವಿಳಂಬ ಕುರಿತು

ಶ್ರೀಮತಿ ಎಸ್. ವೀಣಾ ಅಚ್ಚಯ್ಯ(ವಿಧಾನಸಭೆಯಿಂದ ಚುನಾಯಿತರಾದವರು) -

1118 (1161) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಕೊಡಗು ಜಿಲ್ಲೆಯಲ್ಲಿ ಕಂದಾಯ ಇಲಾಖೆಯ ಕಡತಗಳ ವಿಲೇವಾರಿಗೆ ಸರ್ವರ್ ನಿಧಾನಗತಿ ಸೇರಿದಂತೆ ಇತರೆ ತಾಂತ್ರಿಕ ಕಾರಣಗಳನ್ನು ನೀಡಿ ಸಾಕಷ್ಟು ವಿಳಂಬ ಮಾಡುತ್ತಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಈ ಕುರಿತು ಯಾವ ಕ್ರಮ ಕೈಗೊಳ್ಳಲಾಗಿದೆ;

(ಇ) ವಿಳಂಬ ನೀತಿಯಿಂದಾಗಿ ದಲ್ಲಾಳಿಗಳ ಹಾವಳಿ ಹೆಚ್ಚಾಗಿ, ಮಿತಿಮೀರಿದ ಭ್ರಷ್ಟಾಚಾರ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ದಲ್ಲಾಳಿಗಳು ಹಾಗೂ ಭ್ರಷ್ಟಾಚಾರದಲ್ಲಿ ತೊಡಗಿದ್ದ ಎಷ್ಟು ನೌಕರರ ವಿರುದ್ಧ ಪ್ರಕರಣಗಳು ದಾಖಲಾಗಿವೆ? (ವಿವರ ನೀಡುವುದು)